# ಮೀಸಲಿಗೆ ಒಕ್ಕಲಿಗರ ಕೂಗು

## ಪ್ರಾಧಿಕಾರ ರಚನೆಗೆ ಮನವಿ | ಹೋರಾಟ ನಡೆಸುವ ಸುಳಿವು

ಬೆಂಗಳೂರು: ನಾನಾ ಸಮುದಾಯಗಳು ಮೀಸಲಾತಿ ಹೆಚ್ಚಳ, ಮೀಸಲಾತಿ ಪ್ರವರ್ಗ ಬದಲಾವಣೆಗೆ ಒತ್ತಾಯಿಸುತ್ತಿರುವ ಬೆನ್ನಲ್ಲೇ ಒಕ್ಕಲಿಗ ಸಮುದಾಯವು ಮೀಸಲಾತಿ ಹೆಚ್ಚಳದ ಜತೆಗೆ ಒಕ್ಕಲಿಗ ಅಭಿವೃದ್ಧಿ ಪ್ರಾಧಿಕಾರ ರಚನೆಗೆ ಸರ್ಕಾರವನ್ನು ಒತ್ತಾಯಿಸಲು ನಿರ್ಧರಿಸಿದ್ದು, ಅಗತ್ಯ ಬಿದ್ದರೆ ಹೋರಾಟ ನಡೆಸುವ ಸುಳಿವನ್ನೂ ನೀಡಿದೆ.

ಈ ಸಂಬಂಧ ವಿಜಯನಗರದಲ್ಲಿರುವ ಆದಿ ಚುಂಚನಗಿರಿ ಶಾಖಾಮಠದಲ್ಲಿ ನಡೆದ ಸಭೆಯಲ್ಲಿ ಈ ಬಗ್ಗೆ ತೀರ್ಮಾನ ಕೈಗೊಳ್ಳಲಾಗಿದೆ.

ಸ್ಫಟಿಕಪುರಿ ಸಂಸ್ಥಾನದ ನಂಜಾವಧೂತ ಸ್ವಾಮೀಜಿ ಮಾತನಾಡಿ, ಒಕ್ಕಲಿಗ ಸಮುದಾಯವನ್ನು ಒಡೆಯುವ ಪ್ರಯತ್ನಗಳು ನಡೆಯುತ್ತಿವೆ. ಮೀಸಲಾತಿ ಹೆಚ್ಚಳ ಹಾಗೂ ಪ್ರಾಧಿಕಾರ ರಚನೆಯಾಗುವವರೆಗೆ ಹೋರಾಟ ನಡೆಸಬೇಕು ಎಂದು ಕರೆ ನೀಡಿದರು.

ಮೀಸಲಾತಿ ಹೆಚ್ಚಳಕ್ಕಿರುವ ಅವಕಾಶ, ತಮಿಳುನಾಡಿನಲ್ಲಿ ಶೇ. 69 ಮೀಸಲಾತಿ ಕಲ್ಪಿಸಿರುವುದು. ಸಾಂವಿಧಾನಿಕ ಆಯಾಮಗಳ ಬಗ್ಗೆ ಸಭೆಯಲ್ಲಿ ವಿಸ್ತೃತ ಚರ್ಚೆ ನಡೆಸಲಾಯಿತು.

**ಸಮಿತಿಗಳ ರಚನೆ:** ಒಕ್ಕಲಿಗರ ಮೀಸಲಾತಿ ಹೋರಾಟ ಸಮಿತಿ, ರಾಜ್ಯ ಒಕ್ಕಲಿಗರ ಅಭಿವೃದ್ಧಿ ಪ್ರಾಧಿಕಾರ ಹೋರಾಟ ಸಮಿತಿ ರಚನೆಗೆ ಸಭೆಯಲ್ಲಿ ನಿರ್ಧರಿಸಲಾಯಿತು. ವೈ.ಕೆ. ಪುಟ್ಟಸ್ವಾಮಿಗೌಡ, ಸಿ. ಚಿಕ್ಕಣ್ಣ, ಟಿ.ತಿಮ್ಮೇಗೌಡ, ಡಾ.ಎಚ್.ಎನ್. ಕೃಷ್ಣ, ಕೆ.ವಿ.ಆರ್. ಟ್ಯಾಗೋರ್ ಅವರನ್ನು ಎರಡೂ ಸಮಿತಿಗಳ ಸದಸ್ಯರನ್ನಾಗಿ ನೇಮಕ ಮಾಡಲಾಯಿತು. ಹೋರಾಟದ ರೂಪುರೇಷೆ ಹಾಗೂ ಪ್ರಾಧಿಕಾರದ ಮಾರ್ಗಸೂಚಿಗಳನ್ನು ಸಿದ್ಧಪಡಿಸಲು ನಿವೃತ್ತ ನ್ಯಾ. ಚಂದ್ರಶೇಖರಯ್ಯ, ಶಂಕರಲಿಂಗೇಗೌಡ, ಡಾ.ಎಚ್.ಎನ್. ಕೃಷ್ಣ, ಹಿ.ಚಿ. ಬೋರಲಿಂಗಯ್ಯ, ಪುಟ್ಟೇಗೌಡರನ್ನು ಒಳಗೊಂಡ ತಂಡ ರಚಿಸಲಾಯಿತು.

ನಿವೃತ್ತ ಐಎಎಸ್ ಅಧಿಕಾರಿಗಳಾದ ವೈ.ಕೆ. ಪುಟ್ಟಸ್ವಾಮಿಗೌಡ, ಶಂಕರಲಿಂಗೇಗೌಡ, ಟಿ. ತಿಮ್ಮೇಗೌಡ, ನಿವೃತ್ತ ಐಪಿಎಸ್ ಅಧಿಕಾರಿ ಕೆ.ವಿ.ಆರ್. ಟ್ಯಾಗೋರ್, ನಿವೃತ್ತ ಐಎಫ್ಎಸ್ ಅಧಿಕಾರಿ ಶ್ರೀಕಂಠಯ್ಯ, ನಿವೃತ್ತ ನ್ಯಾಯಮೂರ್ತಿ ಚಂದ್ರಶೇಖರಯ್ಯ, ಕೆಪಿಎಸ್‌ಸಿ ಮಾಜಿ ಅಧ್ಯಕ್ಷ ಡಾ.ಎಚ್.ಎನ್. ಕೃಷ್ಣ, ಸಾಹಿತಿಗಳಾದ ಎಲ್.ಎನ್. ಮುಕುಂದರಾಜ್, ಹಿ.ಚಿ. ಬೋರಲಿಂಗಯ್ಯ, ನಾಗತಿಹಳ್ಳಿ ಚಂದ್ರಶೇಖರ್, ಹಿರಿಯ ವಕೀಲ ಪುಟ್ಟೇಗೌಡ, ಆಡಿಟರ್ ನಾಗರಾಜ್ ಯಲಚವಾಡಿ, ತಲಕಾಡು ಚಿಕ್ಕರಂಗೇಗೌಡ ಇತರರು ಪಾಲ್ಗೊಂಡಿದ್ದರು.

### 115 ಉಪ ಜಾತಿಗಳಿಗೆ ಮೀಸಲಾತಿ ಸಿಗಲಿ



ಸಭೆಯ ಸಾನ್ನಿಧ್ಯ ವಹಿಸಿ ಮಾತನಾಡಿದ ಆದಿಚುಂಚನಗಿರಿ ಮಠದ ಪೀಠಾಧ್ಯಕ್ಷರಾದ ಡಾ.ನಿರ್ಮಲಾನಂದನಾಥ ಸ್ವಾಮೀಜಿ, ಒಕ್ಕಲಿಗ ಸಮುದಾಯದ ಹಿತ ರಕ್ಷಣೆಗಾಗಿ ಮೀಸಲಾತಿ ಹೆಚ್ಚಳ ಅನಿವಾರ್ಯ. ಹಾಗೆಯೇ ಒಕ್ಕಲಿಗರ ಅಭಿವೃದ್ಧಿ ಪ್ರಾಧಿಕಾರ ಶೀಘ್ರವಾಗಿ ರಚನೆಯಾಗಬೇಕಿದೆ. ಈ ಸಂಬಂಧ ಅಧ್ಯಯನ ನಡೆಸಿ ಸರ್ಕಾರಕ್ಕೆ ಮನವಿ ಸಲ್ಲಿಸಬೇಕು ಎಂದು ಹೇಳಿದರು. ಒಕ್ಕಲಿಗ ಸಮುದಾಯದ ಎಲ್ಲ 115 ಉಪ ಜಾತಿಗಳನ್ನು ಹಿಂದುಳಿದ ವರ್ಗಗಳ ಪಟ್ಟಿಗೆ ಸೇರಿಸದ ಕಾರಣ ಅನೇಕ ಉಪಜಾತಿಗಳು ಸರ್ಕಾರದ ಸವಲತ್ತುಗಳಿಂದ ವಂಚಿತವಾಗಿವೆ. ಈ ಎಲ್ಲ ಉಪಜಾತಿಗಳನ್ನು ಹಿಂದುಳಿದ ವರ್ಗಗಳ ಪಟ್ಟಿಗೆ ಸೇರಿಸಬೇಕಿದ್ದು, ಇದಕ್ಕಾಗಿ ಹೋರಾಟದ ಅಗತ್ಯವಿದೆ. ನಗರ ಪ್ರದೇಶದ ಒಕ್ಕಲಿಗ ಸಮುದಾಯವೂ ಸಂಕಷ್ಟದಲ್ಲಿದ್ದು, ಅವರಿಗೂ ಮೀಸಲಾತಿ ಸೌಲಭ್ಯ ಸಿಗಬೇಕಿದೆ. ಗ್ರಾಮೀಣ ಹಾಗೂ ನಗರ ಒಕ್ಕಲಿಗರೆಂಬ ತಾರತಮ್ಯವಿಲ್ಲದೆ ಎಲ್ಲ ಒಕ್ಕಲಿಗರಿಗೂ ಮೀಸಲಾತಿ ಸವಲತ್ತು ಕಲ್ಪಿಸಬೇಕಿದೆ ಎಂದು ಅಭಿಪ್ರಾಯಪಟ್ಟರು.

ಆದಿಚುಂಚನಗಿರಿ ಮಠದ ಶ್ರೀ ಡಾ.ನಿರ್ಮಲಾನಂದನಾಥ ಸ್ವಾಮೀಜಿ ನೇತೃತ್ವದಲ್ಲಿ ನಡೆದ ಸಭೆ